**ಕರ್ನಾಟಕ ಸರ್ಕಾರ**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ACT0GRT2/15/2023 /38

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆರಸ್ತೆ, ಬೆಂಗಳೂರು – 560001,
ದಿನಾಂಕ: 19.06.2024

**:ಸುತ್ತೋಲೆ:**

**ವಿಷಯ:-** ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಅನುದಾನಿತ ಪಾಲಿಟೆಕ್ನಿಕ್ ಹಾಗೂ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸಿ ನಿವೃತ್ತಿ/ನಿಧನ ಹೊಂದಿರುವ ಬೋಧಕ/ಬೋಧಕೇತರ ಸಿಬ್ಬಂದಿಯವರುಗಳಿಗೆ ಟಿಬಿಎಸ್ ನಿಯಮಾನುಸಾರ ಕಡ್ಡಾಯವಾಗಿ ಎಲ್.ಐ.ಸಿ. ಯಲ್ಲಿ ಜೀವ ವಿಮಾ ಪಾಲಿಸಿಯನ್ನು ಹೊಂದುವ ಕುರಿತು.

**ಉಲ್ಲೇಖ:-** 1. ಸರ್ಕಾರದ ಪತ್ರ ಸಂ: ಇಡಿ 286 ಟಿಪಿಇ 2011,ದಿನಾಂಕ:22.11.2011 .

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಾನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜು ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ತ್ರಿವಿಧ ಸೌಲಭ್ಯ ನಿಯಮಗಳು-1976 ರ(ಚಾಪ್ಟರ್-III ಜೀವ ವಿಮೆ)ನಿಯಮ-09 ರಂತೆ ಎಲ್.ಐ.ಸಿ. ಯಲ್ಲಿ ಜೀವ ವಿಮಾ ಪಾಲಿಸಿಯನ್ನು ಹೊಂದುವುದು ಕಡ್ಡಾಯವಾಗಿರುತ್ತದೆ.

ಉಲ್ಲೇಖಿತ ಸರ್ಕಾರದ ಪತ್ರದಲ್ಲಿಯೂ ಸಹ "ಎಲ್.ಐ.ಸಿ. ಪಾಲಿಸಿಯನ್ನು ಮಾಡಿಸದೇ ಇರುವುದರಿಂದ ಪ್ರಸ್ತಾವನೆಯನ್ನು ತಿರಸ್ಕರಿಸಲಾಗಿದೆ" ಎಂಬುದಾಗಿ ತಿಳಿಸಿ, ನಿಯಮಾನುಸಾರ ಪಾಲಿಸಿಯನ್ನು ಮಾಡಿಸದೇ ಇರುವ ಪಿಂಚಣಿ ಪ್ರಸ್ತಾವನೆಯನ್ನು ಹಿಂದಿರುಗಿಸಿರುತ್ತಾರೆ.

ಮುಂದುವರೆದು, ಸಹಾಯಾನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜು ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸಿ ನಿಧನ/ನಿವೃತ್ತರಾಗುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳ ಪಿಂಚಣಿಗೆ ಸಂಬಂಧಿಸಿದಂತೆ ಪ್ರಸ್ತಾವನೆಗಳನ್ನು ಪರಿಶೀಲಿಸಲಾಗಿ, ಹಲವಾರು ಸಂಸ್ಥೆಗಳ ಬೋಧಕ/ಬೋಧಕೇತರ ಸಿಬ್ಬಂದಿಗಳು **ಎಲ್.ಐ.ಸಿ. ಪಾಲಿಸಿಯನ್ನು ಮಾಡಿಸದೇ ಇರುವುದರಿಂದ ಪಿಂಚಣಿ ಸೌಲಭ್ಯವನ್ನು ಮಂಜೂರು ಮಾಡಲು ತ್ರಿವಿಧ ಸೌಲಭ್ಯ ನಿಯಮಗಳಲ್ಲಿ ಅವಕಾಶವಿರುವುದಿಲ್ಲ**.

ಆದುದರಿಂದ, ಇಲಾಖಾ ವ್ಯಾಪ್ತಿಯಲ್ಲಿನ ಸಹಾಯಾನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜು ಸಂಸ್ಥೆಗಳಲ್ಲಿ ಕೈಗೊಳ್ಳಲಾಗಿರುವ ಈ ಹಿಂದಿನ ಆಂತರಿಕ ಲೆಕ್ಕ-ತಪಾಸಣಾ

ವರದಿಗಳಲ್ಲಿಯೂ ಸಹ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಆಕ್ಷೇಪಣೆಗಳನ್ನು ವ್ಯಕ್ತಪಡಿಸಲಾಗಿರುತ್ತದೆ.

ಈ ಮೇಲ್ಕಂಡ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಎಲ್ಲಾ ಸಹಾಯಾನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜು ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಿಂಚಣಿ ಸೌಲಭ್ಯವನ್ನು ಹೊಂದಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಟಿ.ಬಿ.ಎಸ್. (ಚಾಪ್ಟರ್-III ಜೀವ ವಿಮೆ) ನಿಯಮ-09 ರಲ್ಲಿ **"An employee who has completed two years of service,shall within one year there after, insure his/her life with the life insurance corporation of india for a policy maturing with in a period of one yesr prior to the date of superannuation for an amount for which the premium is 6.25 percent of the maximum pay of the time-scale of the post held by the employees on the date of insurance.he should keep the policy alive and unencumbered"**ಎಂದು ತಿಳಿಸಲಾಗಿದೆ, ಅದರಂತೆ ಕ್ರಮ ವಹಿಸಿ, ಕಡ್ಡಾಯವಾಗಿ ಎಲ್.ಐ.ಸಿ. ಪಾಲಿಸಿಯನ್ನು ಹೊಂದುವಂತೆ ಮಾಡಲು ಮುಂದಿನ ಕ್ರಮ ವಹಿಸುವಂತೆ ಈ ಮೂಲಕ ಸೂಚಿಸಲಾಗಿದೆ.

**"ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಿದೆ"**

**ನಿರ್ದೇಶಕರು**
**ತಾಂತ್ರಿಕ ಶಿಕ್ಷಣ ಇಲಾಖೆ**

ಇವರಿಗೆ:-

1. 44 ಅನುದಾನಿತ ಪಾಲಿಟೆಕ್ನಿಕ್ ಪ್ರಾಚಾರ್ಯರುಗಳಿಗೆ.
2. 10 ಅನುದಾನಿತ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರುಗಳಿಗೆ.
3. ಹೆಚ್.ಆರ್.ಎಂ.ಎಸ್ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ತಾಂತ್ರಿಕ ಶಿಕ್ಷಣ ಕೇಂದ್ರ ಕಛೇರಿ ಇ-ಗವರ್ನೆನ್ಸ್ ವಿಭಾಗ- ಮಾಹಿತಿಗಾಗಿ ಹಾಗೂ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು.

ಪ್ರತಿ:-

1. ಆಯುಕ್ತರು ಆಪ್ತ ಶಾಖೆ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು ಆಪ್ತ ಶಾಖೆ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಆಡಳಿತಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಕಛೇರಿ ಪತ್ರಿ.